ಮೈಸೂರ ಗೆಜೆಟ.

ನಂ. 25. ಸರ್ಕಾರದಿಂದ ಪ್ರಯಿಷ್ ಆದ್ದು. ಸ್ 1884.

ಬೆಂಗಳೂರು, ಶನಿವಾರ, ಜ್ಯೂ ಶಾ 21, ಸ್ 1884.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದೀರ್ವಾರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜೀಯವರು, ಸರ್ವೆ ವ ಸೆಟಲ್‌ಮೆಂಟ್ ಕಮ್ಮಿಷನರು, ಇನಾಂ ಸೂಪರ್ಟೆಂಡೆಂಟರು, ಕಾಂಟ್ರೋಲರವರು, ಮಣಿ ಆರ್ಡರ್ ಕಂಟ್ರೋಲರ್, ಪಬ್ಲಿಕ್ ವರ್ಕ್ಸ್ ಆಫೀಸರ್‌ಗಳು, ಮಿಲಿಟೇರಿ ಸಿಕ್ರೆಟರಿಯವರು, ರಿಜಿಸ್ಟ್ರೇರ್ ಇನ್‌ಸ್ಪೆಕ್ಟರ್ ಜನರಲ್ಲವರು, ವಿದ್ಯಾಶಾಲೆ ಡೈರೆಕ್ಟರು, ಅಂಚೆ ಬಕ್ಷೀರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟುವ ಸೆಷನ್ ಜಡ್ಜೀರು, ಡಿ॥ ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜೀರು, ಪೊಲೀಸ್ ಸೂಪರ್ಟೆಂಡೆಂಟರು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತಿ ರಿಪೋರ್ಟುಗಳು; ಪೋಸ್ಟ್‌ಆಫೀಸ್ ನೋಟೀಸ್‌ಗಳು.

3ನೇ ಭಾಗ–ಶ್ರೀಮನ್ಮಹಾರಾಜ ರಾಜಾಸಾಹೇಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷನ್‌ಗಳು, 1884ನೇ ಇಸವಿಯ IIನೇ ರೆಗ್ಯುಲೇಷನ್.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲಾ.

1ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೇಬರವರ ದೀವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಇಸ್ತಿಹಾರ್‌ನಾಮೆಗಳು.

ತಾರೀಖು 24ನೇ ಏಪ್ರೆಲ್ 1884.

ನಂ. 12.—ಇದರಿಂದ ಪ್ರಕಟಪಡಿಸುವದೇನಂದರೆ, ಶಿವಮೊಗ್ಗಾ ವ ಕಡೂರು ಡಿಸ್ಟ್ರಿಕ್ಟು ವುತ್ಪತ್ತೀ ಬಾಬತು ಇದರಡೀ ಕಂಡ ನಾಟೂಗಳು ಅಸಿಸ್ಟೆಂಟ್ ಕರ್ಣಸರ್‌ವೇಟರವರಿಂದ ಕೆಳಗೆ ಕಾಣಿಸಿರುವ ಸ್ಥಳಗಳಲ್ಲಿ ಆಯಾ ತಾರೀಖಿನೊಳಗೆ ಬಹಿರಂಗವಾದ ಹರಾಜ್ ಮೂಲಕ ವಿಕ್ರಯಿಸಲ್ಪಡುವವು:—

ಹರಾಜ್ ನಡಿಯತಕ್ಕ ಸ್ಥಳ.		ಹರಾಜಿನ ತಾರೀಖು.	ತೀಗದ ದಿಮ್ಮಿಗಳು.	ಕಾಡುಮರದ ದಿಮ್ಮಿಗಳು.	ತೀಗ ಮತ್ತು ಕಾಡು ಮರದ ಕೊಡಪಗಳು.	ಒಟ್ಟು.
ಆಯನೂರು	(ಶಿವಮೊಗ್ಗ ತಾಲ್ಲೂಕು) ..	23ನೇ ಜೂ೯ 1884.	50	150	100	300
ಶಿವಮೊಗ್ಗಾ	ಡಿಟೋ ..	25 ಡಿಟೋ	150	350	600	1100

ಹರಾಜಿನ ಷರತ್ತುಗಳು.—ಮೈಸೂರು ಗೆಜೆಟ್ಟಿನಲ್ಲಿ ಥಾಯಿಷ್ ಮಾಡಲ್ಪಟ್ಟ 1873ನೇ ಇಸವಿ ಜೂ೯ 12ನೇ ಮತ್ತು ೦20ನೇ ನಂಬರ್ ಇಸ್ತಿಹಾರ್‌ನಾಮೆ ಪ್ರಕಾರ ಇರುವದು ಮತ್ತು ಹರಾಜ್ ಕಾಲದಲ್ಲಿ ಓದಲ್ಪಡುವದು.

ತಾರೀಖು 12ನೇ ಜೂ೯ 1884.

ನಂ. 54.—ಶಿವಮೊಗ್ಗಾ ಡಿಸ್ಟ್ರಿಕ್ಟು 1ನೇ ಅಸಿಸ್ಟೆಂಟ್ ಕಮಿಷನರ್ ಮೆ॥ ಸೈಯದ್ ನಸೀರುದ್ದೀ೯ ಯವರಿಗೆ, ಸ೯ 1884ನೇ ಏಪ್ರಿಲ್ 20ನೇ ಮತ್ತು ೦ 9ನೇ ನಂಬರ್ ಇಸ್ತಿಹಾರ್‌ನಾಮೆಯಲ್ಲಿ ಕೊಡಲ್ಪಟ್ಟ ರಜಾಕ್ಕೆ ಜಾಸ್ತೀಯಾಗಿ ಯೆರಡುವಾರಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 13ನೇ ಜೂ೯ 1884.

ನಂ. 55.—ಆನೇಕಲ್ ತಾಲ್ಲೂಕು ಅಮಲ್ದಾರ್ ಸ್ವೀತಾದ್ರಿ ಐಯ್ಯಂಗಾರ್ರು, 1884ನೇ ಮೇ 24ನೇ ಮತ್ತು ೦ನಲ್ಲಿ ಕೆಲಸದ ಮೇಲೆ ವಾಪಸ್ ಬಂದದರಿಂದ, ಸ೯ 1884ನೇ ಮೇ 12ನೇ ಮತ್ತು ೦ 26ನೇ ನಂಬರ್‌ಉಳ್ಳ ಈ ಆಫೀಸ್ ಇಸ್ತಿಹಾರ್‌ನಾಮೆಯಲ್ಲಿ ಅವರಿಗೆ ಕೊಡಲ್ಪಟ್ಟ ಪ್ರಿವಿಲೀಜ್ ರಜಾ ಪೈಕೀ ಉಳಿದ ಭಾಗವು ರದ್ದು ಮಾಡಲ್ಪಟ್ಟಿರುತ್ತೆ.

ತಾರೀಖು 21ನೇ ಮಾರ್ಚಿ 1883.

ನಂ. 84.—ಕಾರ್ಯಾರ್ಥ ದೀವಾನರವರನ್ನು ಭೇಟೀ ಮಾಡುವದಕ್ಕೆ ಅಪೇಕ್ಷಿಸುವ ದೊಡ್ಡ ಮನುಷ್ಯರು ಮುಂಗಳವಾರಗಳಲ್ಲಿ ಮಧ್ಯಾನ್ಹಾತ್ಪರ 3 ಘಂಟೆಗೆ ಕಚ್ಚೇರಿಗೆ ಬರತಕ್ಕದ್ದು. ಈ ಬಗ್ಗೆ ಹಿಂದಿನ ದಿನ ಸೆಕ್ರೆಟೇರಿಯವರಿಗೆ ತಮ್ಮ ಕಾರ್ಡ್‌ಗಳನ್ನು ಕಳುಹಿಸತಕ್ಕದ್ದು.

2. ಅರ್ಜೀದಾರರು ಶುಕ್ರವಾರಗಳ ದಿನ ಮಧ್ಯಾನ್ಹಾತ್ಪರ 3 ಘಂಟೆಗೆ ಕಚ್ಚೇರಿಯಲ್ಲಿ ಕೇಳಲ್ಪಡುವರು.

ಬಮೋಜೀಬ ಹುಕ್ಕುಂ,

ಆರ್. ವಿಜಯೀಂದ್ರರಾವ್,

ಸೆಕ್ರಟೇರಿ.

ಪಬ್ಲಿಕ್ ವರ್ಕ್ಸ್.

ಇಸ್ತಿಹಾರ್‌ನಾಮೆ.

ತಾರೀಖು 7ನೇ ಜೂ೯ 1884.

ನಂ. 2096.—ವಿಶೇಷ ಕೆಲಸದಲ್ಲಿರುವ ಎಗ್ಜಿಕ್ಯೂಟಿವ್ ಇಂಜನಿಯರ್ ಮೆ॥ ಎಫ್. ಜೆ. ಮೌಕಲಾರ್ಲಿಯವರಿಗೆ, 1884ನೇ ಜುಲೈ 7ನೇ ಮತ್ತು ೦ ಲಗಾಯತು ಬಂದು ತಿಂಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ಬಮೋಜೀಬ ಹುಕ್ಕುಂ,

ಸಿ. ಹೆಚ್. ಎಂ. ಕೆ೯ಸಿಂಗ್‌ಟ೯, ಕೆಪ್ಟ್ಯ, ರಾ. ಇ.

ಮೈಸೂರು ಮರಮತ್ತು ಇಲಾಖಾ ಸೆಕರ್‌ಟೇರಿ.